## ಕರ್ನಾಟಕ ಸರ್ಕಾರದ ನಡವಳಿಗಳು

ಸಿಬ್ಬಂದಿ ತರಬೇತಿ ಮತ್ತು ಸಂಶೋಧನಾ ಕೇಂದ್ರ-ಮಳವಳ್ಳಿ, ಇಲ್ಲಿಗೆ ತರಬೇತಿಗಾಗಿ ಬರುವ ಸಿಬ್ಬಂದಿಗಳಿಗೆ ಒದಗಿಸುವ ವಸತಿ ಸೌಕರ್ಯಕ್ಕೆ ಬಾಡಿಗೆ ದರ ನಿಗಧಿ ಪಡಿಸುವ ಬಗ್ಗೆ.

ದಲಾಗಿದೆ:
1)ಸರ್ಕಾರಿ ಆದೇಶ ಸಂಖ್ಯೆ: ಕಾಇ 105 ಇಟಿಐ 2006 ದಿನಾಂಕ:27/12/2006.
2)ಆಯುಕ್ತರು, ಉದ್ಯೋಗ ಮತ್ತು ತರಬೇತಿ ಇಲಾಖೆ ರವರ ಪತ್ರ ಸಂ. ಉತಇ/ತರಬೇತಿ/ಕಟ್ಟಡ-1/ವಿವ-76/2005-06 ದಿನಾಂಕ 29/6/2007.
3) ಆಯುಕ್ತರು, ಉದ್ಯೋಗ ಮತ್ತು ತರಬೇತಿ ಇಲಾಖೆ ರವರ ಪತ್ರ ಸಂ. ಉತನಿ/ತರಬೇತಿ/ಕ-1/ವಿವ-76/2006-07 ದಿನಾಂಕ 3/1/2008.

ಪ್ರಸ್ತಾವನೆ:

ಮೇಲೆ ಓದಲಾದ ಉಲ್ಲೇಖಿತ (1)ರ ಸರ್ಕಾರಿ ಆದೇಶದಲ್ಲಿ ಉದ್ಯೋಗ ಮತ್ತು ತರಬೇತಿ ಇಲಾಖೆಯ ತರಬೇತಿ ವಿಭಾಗದಡಿ ರಾಜ್ಯದ ವಿವಿಧ ಕೈಗಾರಿಕಾ ತರಬೇತಿ ಸಂಸ್ಥೆಗಳ ತರಬೇತಿದಾರರಿಗೆ ತರಬೇತಿಯನ್ನು ನೀಡಲು ಮಂಡ್ಯ ಜಿಲ್ಲೆಯ ಮಳವಳ್ಳಿಯಲ್ಲಿ ರಾಜ್ಯ ತರಬೇತಿ ಮತ್ತು ಸಂಶೋಧನಾ ಕೇಂದ್ರವನ್ನು ಸ್ಥಾಪಿಸಲು ಅನುಮತಿ ನೀಡಲಾಗಿದೆ.

ಆಯುಕ್ತರು, ಉದ್ಯೋಗ ಮತ್ತು ತರಬೇತಿ ಇಲಾಖೆ ರವರು ಮೇಲೆ ಓದಲಾದ ಉಲ್ಲೇಖಿತ(2)ರ ಪತ್ರದಲ್ಲಿ ಮಳವಳ್ಳಿಯ ರಾಜ್ಯ ತರಬೇತಿ ಮತ್ತು ಸಂಶೋಧನಾ ಕೇಂದ್ರದಲ್ಲಿ ತರಬೇತಿಗಾಗಿ ರಾಜ್ಯದ ವಿವಿಧ ಸ್ಥಳಗಳಿಂದ ಬರುವ ಸಿಬ್ಬಂದಿಗಳಿಗೆ ವಸತಿ ಸೌಕರ್ಯವನ್ನು ಒದಗಿಸಲು ಇಲಾಖಾ ವಸತಿ ಗೃಹಗಳನ್ನು ನಿರ್ಮಾಣ ಮಾಡಿಸಲಾಗುತ್ತಿದ್ದು, ಹೀಗೆ ವಸತಿ ಗೃಹಗಳಲ್ಲಿ ತರಬೇತಿಗಾಗಿ ಬರುವ ಸಿಬ್ಬಂದಿಗಳಿಗೆ ಒಂದು ದಿನಕ್ಕೆ ರೂ. 30/- ಗಳಂತೆ ಬಾಡಿಗೆ ನಿಗಧಿಪಡಿಸಲು ಸರ್ಕಾರದ ಮಂಜೂರಾತಿಯನ್ನು ನೀಡುವಂತೆ ಆಯುಕ್ತರು ಕೋರಿರುತ್ತಾರೆ.

ಆಯುಕ್ತರು, ಉದ್ಯೋಗ ಮತ್ತು ತರಬೇತಿ ಇಲಾಖೆ ರವರು ಮೇಲೆ ಓದಲಾದ ಉಲ್ಲೇಖಿತ(3)ರ ಪತ್ರದಲ್ಲಿ ತರಬೇತಿಗಾಗಿ ಬರುವ ಸಿಬ್ಬಂದಿಗಳಿಂದ ವಸೂಲಾಗುವ ಬಾಡಿಗೆ ಮೊತ್ತವನ್ನು ಇಲಾಖೆಯ ರಾಜ್ಯಾದಾಯ ಜಮೆ ಲೆಕ್ಕಶೀರ್ಷಿಕೆ 0230-00800-400 ಕ್ಕೆ ಜಮಾ ಮಾಡಲು ಉದ್ದೇಶಿಸಲಾಗಿದೆ ಎಂದು ತಿಳಿಸಿರುತ್ತಾರೆ.

ವಿಷಯವನ್ನು ಕೂಲಂಕಷವಾಗಿ ಪರಿಶೀಲಿಸಿದ ನಂತರ ಈ ಕೆಳಗಿನಂತೆ ಆದೇಶಿಸಲಾಗಿದೆ.

### ಸರ್ಕಾರಿ ಆದೇಶ ಸಂಖ್ಯೆ ಕಾಇ 275 ಇಟಿಐ 2007 ಬೆಂಗಳೂರು, ದಿನಾಂಕ: 14/3/2008.

ಮಳವಳ್ಳಿಯ ರಾಜ್ಯ ತರಬೇತಿ ಮತ್ತು ಸಂಶೋಧನಾ ಕೇಂದ್ರದಲ್ಲಿ ರಾಜ್ಯದ ವಿವಿಧ ಸ್ಥಳಗಳಿಂದ ತರಬೇತಿಗಾಗಿ ಬರುವ ಸಿಬ್ಬಂದಿಗಳಿಗೆ ಒದಗಿಸುವ ವಸತಿ ಸೌಕರ್ಯಕ್ಕಾಗಿ ದಿನವೊಂದಕ್ಕೆ ತಲಾ ರೂ. 30/- (ಮೂವತ್ತು ರೂಪಾಯಿಗಳು ಮಾತ್ರ) ಗಳಂತೆ ಬಾಡಿಗೆ ವಿಧಿಸುವುದಕ್ಕೆ ಮಂಜೂರಾತಿ ನೀಡಲಾಗಿದೆ ಮತ್ತು ವಸೂಲಾದ ಬಾಡಿಗೆ ಮೊತ್ತವನ್ನು ಉದ್ಯೋಗ ಮತ್ತು ತರಬೇತಿ ಇಲಾಖೆಯಿಂದ ರಾಜ್ಯಾದಾಯ ಜಮೆ ಲೆಕ್ಕಶೀರ್ಷಿಕೆ 0230-00800-400 ಕ್ಕೆ ಜಮಾ ಮಾಡಲು ಸೂಚಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 85 ವೆಚ್ಚ-9/2008 ದಿನಾಂಕ 26/2/2008ರಲ್ಲಿ ನೀಡಿರುವ ಸಹಮತಿಯೊಂದಿಗೆ ಈ ಆದೇಶವನ್ನು ಹೊರಡಿಸಲಾಗಿದೆ

ಭಾರತ ರಾಷ್ಟ್ರಪತಿಯವರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

14/3/08
(ಅಬ್ದುಲ್ ರೆಹಮಾನ್)
ಪೀಠಾಧಿಕಾರಿ,
ಕಾರ್ಮಿಕ ಇಲಾಖೆ.
(ಉದ್ಯೋಗ ಮತ್ತು ತರಬೇತಿ)

ಇವರಿಗೆ:

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2) ಆಯುಕ್ತರು, ಉದ್ಯೋಗ ಮತ್ತು ತರಬೇತಿ ಇಲಾಖೆ, ಬೆಂಗಳೂರು
3) ಆರ್ಥಿಕ ಇಲಾಖೆ, ವೆಚ್ಚ-9, ವಿಧಾನಸೌಧ, ಬೆಂಗಳೂರು.
4) ಆಂತರಿಕ ಆರ್ಥಿಕ ಸಲಹೆಗಾರರು, ಸಮಾಜ ಕಲ್ಯಾಣ, ಕಾರ್ಮಿಕ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
5) ಉಪನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು.
6) ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
7) ಸರ್ಕಾರದ ಪ್ರಧಾನಕಾರ್ಯದರ್ಶಿಯವರ ಆಪ್ತಕಾರ್ಯದರ್ಶಿ, ಕಾರ್ಮಿಕ ಇಲಾಖೆ, ವಿಕಾಸಸೌಧ
8) ಸರ್ಕಾರದ ಉಪಕಾರ್ಯದರ್ಶಿಯವರು, ಕಾರ್ಮಿಕ ಇಲಾಖೆ, ವಿಕಾಸಸೌಧ, ಬೆಂಗಳೂರು.
9) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.